**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾಗಳ ನ್ಯಾಯಾಲಯ, ಯಾದಗಿರಿ**

**ಸಿ.ಸಿ. ನಂ.661/2025**

ಫಿರ್ಯಾದುದಾರರು: ಶ್ರೀ ಶ್ರೀನಿವಾಸ ತಂದೆ ವಿಠ್ಠಲರಾವ್ ಅರಸಿದ್

ವಿರುದ್ಧ

ಆಪಾದಿತ: ಶ್ರೀ ಮಲ್ಲಪ್ಪ ನಾಯಕ್ (ಗೋಲ) ತಂದೆ ವೆಂಕಟಪ್ಪ ಗೋಲ,

ಆಪಾದನೆ

ಶ್ರೀ ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(HonorS) ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಕೆಳಕಂಡಂತೆ ದೋಷರೋಪಣೆಯನ್ನು ಹೊರಿಸುತ್ತಿದ್ದೇನೆ.

ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ **15.01.2025** ರಂದು ರೂ.**4,00,000/-**ಗಳನ್ನು ಸಾಲಪಡೆದಿದ್ದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಯುನಿಯನ್ ಬ್ಯಾಂಕ್ ಆಫ್ ಇಂಡಿಯಾ, ಗುರುಮಠಕಲ್ ಶಾಖೆಗೆ ಸೇರಿದ **72020429** ಸಂಖ್ಯೆಯ ಚೆಕ್ ನಲ್ಲಿ ರೂ. **4,00,000/-** ಹಾಗೂ ದಿನಾಂಕ **28.04.2025** ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ. ಸದರಿ ಚೆಕ್‌ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಬ್ಯಾಂಕ್ ಆಫ್ ಇಂಡಿಯಾ, ಗುರುಮಠಕಲ್ ಶಾಖೆಯ ಮೂಲಕ ದಿನಾಂಕ **28.04.2025** ರಂದು ಹಾಜರು ಪಡಿಸಿದಾಗ, "Funds Insufficient" ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ **28.04.2025** ರಂದು ವಾಪಸ್ಸು ನೀಡಿರುತ್ತಾರೆ. ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **15.05.2025** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ **25.05.2025** ರಂದು ಜಾರಿಯಾಗಿರುತ್ತದೆ. ಆಪಾದಿತನಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ

ವರ್ಗಾವಣೀಯ ಲಿಖಿತ ಕಾಯ್ದೆ ಕಲಂ **138** ರ ರಿತ್ಯಾ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಾ ಎಂದು ಆಪಾದಿಸಲಾಗಿದೆ.

ಪ್ರಶ್ನೆ- 1 : ನಿಮ್ಮ ಮೇಲೆ ಹೊರಿಸಲಾಗಿರುವ ಆಪಾದನೆಯನ್ನು

ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ :

ಪ್ರಶ್ನೆ-2 : ನೀವು ಸದರೀ ಆಪಾದನೆಯನ್ನು ಒಪ್ಪಿಕೊಳ್ಳುವಿರಾ? ಅಥವಾ

ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೆ ?

ಉತ್ತರ :

(ಮೇಲ್ಕಂಡಂತೆ ಆಪಾದನೆಯನ್ನು ಆಪಾದಿತನಿಗೆ ತಿಳಿದ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರಗಳನ್ನು ಬರೆದುಕೊಂಡಿರುವುದಾಗಿ ದೃಢೀಕರಿಸಲಾಗಿದೆ.)

ದಿನಾಂಕಃ 16.10.2025.
ಸ್ಥಳಃ ಯಾದಗಿರ

ಪ್ರಧಾನ ದಿವಾಣಿ ನ್ಯಾಯಾಧಿಶರು
ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
ಯಾದಗಿರಿ.